**All India Radio: Bangalore**
**Regional Bulletin In Kannada**
**22.03.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ನವಮಂಗಳೂರು ಬಂದರಿಗೆ ನಿನ್ನೆಯಿಂದ ೨ ಇಂಧನ ಹಡಗುಗಳ ಆಗಮನ : ಅಕ್ವಾಟೈಟಾನ್ ಹಡಗಿನಿಂದ ೬೭ ಸಾವಿರ ಮೆಟ್ರಿಕ್ ಟನ್ ಕಚ್ಚಾತೈಲ ಸಂಸ್ಕರಣಾ ಘಟಕಕ್ಕೆ ಇಳಿಸುವ ಕಾರ್ಯ ಆರಂಭ
2. ಬೇಸಿಗೆ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಮುಂಜಾಗ್ರತಾ ವ್ಯವಸ್ಥೆ ಕೈಗೊಳ್ಳಲು ಅಧಿಕಾರಿಗಳಿಗೆ ಸರ್ಕಾರದ ಸೂಚನೆ
3. ವಿಧಾನಸಭಾ ಉಪಚುನಾವಣೆ;ಮತಗಟ್ಟೆಗಳಲ್ಲಿ ಮತದಾರರಿಗೆ ಅನುಕೂಲವಾಗುವ ಕನಿಷ್ಠ ಸೌಲಭ್ಯ ಖಾತರಿಪಡಿಸಲು ಚುನಾವಣಾ ಆಯೋಗದ ಕಟ್ಟುನಿಟ್ಟಿನ ನಿರ್ದೇಶನ
4. ವಿಧಾನಸಭಾ ಉಪಚುನಾವಣೆಗೆ ಕಾಂಗ್ರೆಸ್‌ನಿಂದ ಅಭ್ಯರ್ಥಿ ಪಟ್ಟಿ ಪ್ರಕಟ
5. ವಿಶ್ವ ಜಲ ದಿನದ ಸಂದರ್ಭದಲ್ಲಿಂದು ನೀರು ಸಂರಕ್ಷಣೆ ಕುರಿತು ಗಣ್ಯರಿಂದ ಜನ ಜಾಗೃತಿ

<><><><>

ಪಶ್ಚಿಮ ಏಷ್ಯಾ ಸಂಘರ್ಷದ ನಡುವೆ ರಷ್ಯಾದಿಂದ ಚೀನಾಕ್ಕೆ ಹೊರಟಿದ್ದ ಅಕ್ವಾ ಟೈಟಾನ್ ಹೆಸರಿನ ಕಚ್ಚಾತೈಲ ಹೊತ್ತ ಬೃಹತ್ ಹಡಗು ನವ ಮಂಗಳೂರು ಬಂದರಿಗೆ ಆಗಮಿಸಿದ್ದು, ತೈಲ ಇಳಿಸುವ ಕಾರ್ಯ ಭರದಿಂದ ಸಾಗಿದೆ. ಅದೇ ರೀತಿ ಅಮೇರಿಕಾದಿಂದ ಎಲ್‌ಪಿಜಿ ಸರಕು ಹಡಗು ಕೂಡ ಇಂದು ನವಮಂಗಳೂರು ಬಂದರು ತಲುಪಿದೆ. ಅಕ್ವಾ ಟೈಟಾನ್ ಹಡಗಿನಿಂದ ೬೭ ಸಾವಿರ ಮೆಟ್ರಿಕ್ ಟನ್ ನಷ್ಟು ಕಚ್ಚಾತೈಲವನ್ನು ಎಂಆರ್‌ಪಿಎಲ್ ತೈಲ ಸಂಸ್ಕರಣಾ ಘಟಕಕ್ಕೆ ಪೂರೈಕೆ ಮಾಡಲಾಗುತ್ತಿದೆ. ಈ ಸರಕು ಹಡಗು ಜನವರಿ ಅಂತ್ಯದ ವೇಳೆಗೆ ರಷ್ಯಾದಲ್ಲಿ ಕಚ್ಚಾತೈಲವನ್ನು ತುಂಬಿಸಿಕೊಂಡು ಹೊರಟಿತ್ತು. ಚೀನಾಕ್ಕೆ ತೆರಳುವ ಗುರಿ ಹೊಂದಿದ್ದ ಹಡಗು ಕಾರಣಾಂತರಗಳಿಂದಾಗಿ ಆಗ್ನೇಯ ಏಷ್ಯಾದ ಜಲ ಪ್ರದೇಶಕ್ಕೆ ಬರುತ್ತಿದ್ದಂತೆ ಹಡಗಿನ ಪಥ ಬದಲಿಸಲಾಗಿದ್ದು, ಮಂಗಳೂರು ತಲುಪಿದೆ. ನವ ಮಂಗಳೂರು ಬಂದರಿನಿಂದ ೧೨ ನಾವಿಕ ಮೈಲು ದೂರದಿಂದ ಪೈಪ್‌ಲೈನ್ ಮೂಲಕ ಎಂಆರ್‌ಪಿಎಲ್ ತೈಲ ಶುದ್ಧೀಕರಣ ಘಟಕಕ್ಕೆ ಈ ತೈಲವನ್ನು ಮರುಪೂರಣಗೊಳಿಸಲಾಗುತ್ತಿದೆ. ಅಮೇರಿಕಾದ ಟೆಕ್ಸಾಸ್‌ನಿಂದ ಮಂಗಳೂರಿಗೆ ಆಗಮಿಸಿರುವ ಪಿಕ್ಸಿಸ್ ಪಯನೀರ್ ಹೆಸರಿನ ಎಲ್ ಪಿ ಜಿ ಕಾರ್ಗೋ ಹಡಗು ೧೭ ಸಾವಿರದ ೭೧೪ ಮೆಟ್ರಿಕ್ ಟನ್ ಎಲ್‌ಪಿಜಿ ಹೊತ್ತು ಬಂದಿದೆ. ವಿದೇಶದಿಂದ ಕರ್ನಾಟಕಕ್ಕೆ ಆಗಮಿಸಿದ ಮೊದಲ ಎಲ್‌ಪಿ ಜಿ ಹಡಗು ಇದಾಗಿದೆ. ಈ ಹಡಗು ಮಾಚ್ ೧೪ ರಂದು ಅಮೇರಿಕದಿಂದ ಹೊರಟಿತ್ತು.

<><><><>

ಬೇಸಿಗೆ ಸಂದರ್ಭದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗದಂತೆ ನೋಡಿಕೊಳ್ಳಲು ಎಲ್ಲಾ ಅಗತ್ಯ ಮುಂಜಾಗ್ರತಾ ವ್ಯವಸ್ಥೆಗಳನ್ನು ಮಾಡಿಕೊಳ್ಳಲು ರಾಜ್ಯ ಸರ್ಕಾರ ಅಧಿಕಾರಿಗಳಿಗೆ ಸೂಚಿಸಿದೆ. ಪಂಚಾಯತ್ ರಾಜ್ ಹಾಗೂ ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಸಾಮಾಜಿಕ ಜಾಲತಾಣದಲ್ಲಿ ಈ ವಿಷಯ ತಿಳಿಸಿದ್ದಾರೆ. ಮುಂದಿನ ಮೂರು ತಿಂಗಳು ಪ್ರತಿ ತಿಂಗಳಿನ ೨ನೇ ಹಾಗೂ ४ನೇ ಸೋಮವಾರದಂದು ಪಂಚಾಯತ್ ಅಭಿವೃದ್ಧಿ ಅಧಿಕಾರಗಳ ಕುಡಿಯುವ ನೀರಿನ

ಸಮಸ್ಯೆ ಕುರಿತ ವಸ್ತು ಸ್ಥಿತಿಯ ಬಗ್ಗೆ ಸಭೆ ನಡೆಸಬೇಕು ಹಾಗೂ ಆಯಾ ಜಿಲ್ಲೆಗಳಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಕೈಗೊಂಡ ಕ್ರಮಗಳ ಬಗ್ಗೆ ಸಾರ್ವಜನಿಕರಿಗೆ ಮಾಹಿತಿಯನ್ನು ನೀಡಲು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ. ಎಲ್ಲಾ ಜಿಲ್ಲಾ ಪಂಚಾಯಿತಿಗಳಲ್ಲಿ ದಿನವೀಡಿ ಕಾರ್ಯ ನಿರ್ವಹಿಸುವ ನಿಯಂತ್ರಣ ಕೊಠಡಿಗಳನ್ನು ತೆರೆದು, ಸಿಬ್ಬಂದಿಗಳನ್ನು ನಿಯೋಜಿಸಲು ಹಾಗೂ ತಾಲ್ಲೂಕು ಮಟ್ಟದಲ್ಲಿ ಕಾರ್ಯಾನಿರ್ವಾಹಕ ಅಧಿಕಾರಿಗಳ ಮುಖಾಂತರ ಕ್ಷಿಪ ಕಾರ್ಯಪಡೆಯನ್ನು ರಚಿಸಿ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ತಿಳಿಸಲಾಗಿದೆ. ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿನ ನೀರಿನ ಮೂಲಗಳನ್ನು ಪರಿಶೀಲನೆ ನಡೆಸಿ, ಕೊಳವೆಬಾವಿಗಳ ಸುತ್ತಮುತ್ತಲೂ ಯಾವುದೇ ಕಲುಷಿತ ನೀರು ಅಥವಾ ಚರಂಡಿ ನೀರು ನಿಲ್ಲದಂತೆ ಮುಂಜಾಗ್ರತೆ ವಹಿಸಲು ಸಚಿವರು ನಿರ್ದೇಶಿಸಿದ್ದಾರೆ.

<><><><>

ಕೇಂದ್ರ ಸರ್ಕಾರ ಆದಾಯ ತೆರಿಗೆ, ನೂತನ ನಿಯಮಗಳು ೨೦೨೬ನ್ನು, ಅಧಿಸೂಚಿಸಿದ್ದು, ಏಪ್ರಿಲ್ ೧ನೇ ತಾರೀಖಿನಿಂದ, ನೂತನ ನಿಯಮಗಳು ಜಾರಿಗೊಳ್ಳಲಿವೆ. ಆದಾಯ ತೆರಿಗೆ ಕಾಯ್ದೆ ೨೦೨೫ರ ನಿಬಂಧನೆಗಳನ್ನು, ಜಾರಿಗೊಳಿಸಲು, ಹೊಸ ನಿಯಮಗಳನ್ನು ರೂಪಿಸಲಾಗಿದೆ. ಸುಧಾರಿತ ಪದ್ಧತಿ, ತೆರಿಗೆ ಪಾವತಿ ಪ್ರಕ್ರಿಯೆ ಸರಳ, ಸುಗಮ ಮತ್ತು ನಿಯಮಗಳ ಸಂಖ್ಯೆಯನ್ನು ಕಡಿಮೆ ಮಾಡಿ, ಆಡಳಿತಾತ್ಮಕ ಸಂಕೀರ್ಣತೆಯನ್ನು ತಗ್ಗಿಸಿ, ಜನಸ್ನೇಹಿಯಾಗಿಸುವುದು, ಮುಖ್ಯ ಉದ್ದೇಶವಾಗಿದೆ ಎಂದು, ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ರಾಣಿ ಕ್ರಾಸ್ ಸಮೀಪ ರಸ್ತೆಯಲ್ಲಿ ನಿನ್ನೆ ತಡರಾತ್ರಿ ಸಂಭವಿಸಿದ ಅಪಘಾತದಲ್ಲಿ ಮೂವರು ಮೃತಪಟ್ಟಿದ್ದಾರೆ. ೮ ಮಂದಿ ಗಾಯಗೊಂಡಿದ್ದಾರೆ. ಹೆದ್ದಾರಿಯಿಂದ ಸರ್ವೀಸ್ ರಸ್ತೆಗೆ ಬರುತ್ತಿದ್ದ ಟಿಟಿ ವಾಹನ ತಿರುವು ಪಡೆಯುವ ವೇಳೆ ಲಾರಿಗೆ ಡಿಕ್ಕಿಯಾದ ಪರಿಣಾಮ ಈ ಅಪಘಾತ ನಡೆದಿದೆ ಎಂದು ಮೂಲಗಳು ತಿಳಿಸಿವೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><><><>

ಉಪಚುನಾವಣೆ ನಡೆಯಲಿರುವ ರಾಜ್ಯದ ಬಾಗಲಕೋಟೆ ಮತ್ತು ದಾವಣಗೆರೆ ವಿಧಾನಸಭಾ ಕ್ಷೇತ್ರಗಳ ಮತಗಟ್ಟೆಗಳಲ್ಲಿ ಮತದಾರರಿಗೆ ಅನುಕೂಲವಾಗುವಂತೆ ಎಲ್ಲ ಕನಿಷ್ಠ ಸೌಲಭ್ಯ ಖಾತರಿಪಡಿಸಬೇಕು ಎಂದು ಚುನಾವಣಾ ಆಯೋಗ ನಿರ್ದೇಶಿಸಿದೆ. ಚುನಾವಣಾ ದಿನದಂದು ಮತದಾರರಿಗೆ ಅನುಕೂಲವಾಗುವಂತೆ ಕುಡಿಯುವ ನೀರು, ನೆರಳಿನ ವ್ಯವಸ್ಥೆ, ನೀರಿರುವ ಶೌಚಾಲಯ ವಿಶೇಷ ಚೇತನರಿಗಾಗಿ ಸೂಕ್ತ ರ್‍ಯಾಂಪ್ ವ್ಯವಸ್ಥೆ ಮೊದಲಾದ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಚುನಾವಣಾ ಆಯೋಗ ರಾಜ್ಯ ಚುನಾವಣಾ ಅಧಿಕಾರಿಗಳಿಗೆ ಸೂಚನೆ ನೀಡಿದೆ. ಮತದಾರರಲ್ಲಿ ತಿಳಿವಳಿಕೆ ಹೆಚ್ಚಿಸಲು ಮತಗಟ್ಟೆ, ಹಾಗೂ ಅಭ್ಯರ್ಥಿಗಳ ವಿವರ ಪಾಲಿಸಬೇಕಾದ ನಿಯಮ ಅನುಮೋದಿತ ಗುರುತಿನ ದಾಖಲೆ ಹಾಗೂ ಮತದಾನ ಪ್ರಕ್ರಿಯೆ ಒಳಗೊಂಡ ಮತದಾರರ ಸೌಲಭ್ಯ ಭಿತ್ತಿಪತ್ರಗಳನ್ನು ಮತಗಟ್ಟೆಗಳಲ್ಲಿ ಪ್ರಮುಖವಾಗಿ ಪ್ರದರ್ಶಿಸುವ ವ್ಯವಸ್ಥೆ ಮಾಡಬೇಕು. ಮತದಾರರ ನೆರವು ಬೂತ್‌ಗಳನ್ನು ಸ್ಥಾಪಿಸಬೇಕು ಎಂದು ಚುನಾವಣಾ ಆಯೋಗ ತಿಳಿಸಿದೆ. ಮತಗಟ್ಟೆ ಪ್ರವೇಶದ ಹೊರಗಡೆ ಮೊಬೈಲ್ ಫೋನ್‌ಗಳನ್ನು ಇಡಲು ಅವಕಾಶ ಕಲ್ಪಿಸಲು ಸೂಚಿಸಲಾಗಿದೆ.

<><><><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಹಿರಿಯ ನಾಗರಿಕರು ಮತ್ತು ವಿಶೇಷ ಚೇತನರಿಗೆ ಮನೆಯಿಂದಲೇ ಮತ ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಕ್ಷೇತ್ರದಲ್ಲಿ ಒಟ್ಟು ೨ ಸಾವಿರದ ೬೬ ಮಂದಿ ೮೫ ವರ್ಷಕ್ಕೂ ಮೇಲ್ಪಟ್ಟ ಹಿರಿಯ ನಾಗರಿಕರಿದ್ದಾರೆ. ಇವರು ಅಂಚೆ ಮತಪತ್ರದ ಮೂಲಕ ಮನೆಯಿಂದಲೇ ಮತದಾನ ಮಾಡಬಹುದಾಗಿದೆ. ಇದರೊಂದಿಗೆ ಕ್ಷೇತ್ರದಲ್ಲಿ ಗುರುತಿಸಲಾದ ೨ ಸಾವಿರದ ೫೧೮ ವಿಶೇಷ ಚೇತನ ಮತದಾರರಿಗೂ ಇದೇ ಸೌಲಭ್ಯ ಅನ್ವಯಿಸಲಿದೆ ಎಂದರು. ಕ್ಷೇತ್ರದಲ್ಲಿ ಒಟ್ಟು ೨ ಲಕ್ಷದ ೩೧ ಸಾವಿರದ ೬೮೩ ಮತದಾರರಿದ್ದು, ಈ ಪೈಕಿ ೧ ಲಕ್ಷದ ೧೭ ಸಾವಿರದ, ೯೮೬ ಮಹಿಳೆಯರು ಹಾಗೂ ೧ ಲಕ್ಷದ ೧೩ ಸಾವಿರದ ೬೫೪ ಪುರುಷ ಮತದಾರರಿದ್ದಾರೆ. ಪುರುಷರಿಗಿಂತ ೪ ಸಾವಿರದ ೩೩೨ಕ್ಕೂ ಹೆಚ್ಚು ಮಹಿಳಾ ಮತದಾರರು ಕ್ಷೇತ್ರದಲ್ಲಿರುವುದು ವಿಶೇಷ ಎಂದು ತಿಳಿಸಿದರು.

**ಧ್ವನಿ: ಜಿಲ್ಲಾ ಚುನಾವಣಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ (೩೩ ಸೆಕೆಂಡ್‌ಗಳು)**

<><><><>

ಉಪ ಚುನಾವಣೆ ನಡೆಯಲಿರುವ ರಾಜ್ಯದ ಎರಡು ವಿಧಾನಸಭಾ ಕ್ಷೇತ್ರಗಳಿಗಾಗಿ ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿದೆ. ಬಾಗಲಕೋಟೆಯಿಂದ ಉಮೇಶ್ ಮೇಟಿ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದಿಂದ ಸಮರ್ಥ್ ಮಲ್ಲಿಕಾರ್ಜುನ್ ಸ್ಪರ್ಧಿಸಲು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅನುಮೋದಿಸಿದ್ದಾರೆ ಎಂದು ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ಇಂದು ವಿಶ್ವ ಜಲ ದಿನ. ನೀರು ಹರಿಯುವ ಸ್ಥಳದಲ್ಲಿ ಸಮಾನತೆ ಬೆಳೆಯುತ್ತದೆ ಎನ್ನುವುದು ಈ ವರ್ಷದ ಘೋಷ ವಾಕ್ಯವಾಗಿದೆ. ವಿಶ್ವ ಜಲದಿನದ ಸಂದರ್ಭದಲ್ಲಿ ವಿವಿಧೆಡೆ ನೀರಿನ ಸಂರಕ್ಷಣೆ ಕುರಿತ ಜನ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ನೀಡಿ, ನೀರು ಕೇವಲ ಒಂದು ಸಂಪನ್ಮೂಲವಲ್ಲ, ಬದಲಿಗೆ ಅದು ಜೀವನ, ಜೀವನೋಪಾಯ ಮತ್ತು ನಮ್ಮೆಲ್ಲರ ಭವಿಷ್ಯದ ಅಡಿಪಾಯ. ಇಂದು ಉಳಿಸುವ ಪ್ರತಿಯೊಂದು ಹನಿ ನೀರು ಪರಿಸರವನ್ನು ಬಲಪಡಿಸುತ್ತದೆ ಮತ್ತು ಮುಂದಿನ ಪೀಳಿಗೆಗೆ ನೀರಿನ ಭದ್ರತೆಯನ್ನು ಖಚಿತಪಡಿಸುತ್ತದೆ ಎಂದು ತಿಳಿಸಿದ್ದಾರೆ. ಜೀವಸಂಕುಲದ ಅಸ್ತಿತ್ವಕ್ಕೆ ನೀರು ಅತ್ಯಮೂಲ್ಯವಾಗಿದ್ದು, ಕುಸಿಯುತ್ತಿರುವ ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಎಲ್ಲರೂ ಜಲಮೂಲಗಳನ್ನು ಸಂರಕ್ಷಿಸಬೇಕಿದೆ. ಶುದ್ಧ ನೀರನ್ನು ಮಿತವಾಗಿ ಬಳಸುವುದು ಸುಸ್ಥಿರ ಭವಿಷ್ಯಕ್ಕೆ ಅನಿವಾರ್ಯವಾಗಿದೆ. ಮುಂದಿನ ಪೀಳಿಗೆಗಾಗಿ ನೀರನ್ನು ಉಳಿಸುವ ಪ್ರತಿಜ್ಞೆಯನ್ನು ಎಲ್ಲರೂ ಕೈಗೊಳ್ಳಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>